**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.ರವರ ನ್ಯಾಯಾಲಯ,**
**ಟಿ.ನರಸೀಪುರ**

**ದಿನಾಂಕ 5 ನೇ ಫೆಬ್ರವರಿ 2025**

**ಸಿಸಿ ಸಂಖ್ಯೆ: 1950/2025**

ಫಿರ್ಯಾದಿಃ : ರಾಜ್ಯದ ಪರವಾಗಿ ತಲಕಾಡು ಪೊಲೀಸ್ ಠಾಣೆ

ವಿರುದ್ಧ

ಆರೋಪಿಗಳು : ಪಿ.ನಗರಾಜು ಬಿನ್ ಲೇಟ್ ಪುಟ್ಟಯ್ಯ,
ವಯಸ್ಸು 52 ವರ್ಷ,
ವಾಸಃ ವಾಟಾಳು ಗ್ರಾಮ, ಮೂಗೂರು ಹೋಬಳಿ, ಬಾಬು
ಜಗಜೀವನ್ ರಾಂ ಬೀದಿ, ಟಿ.ನರಸೀಪುರ ತಾಲ್ಲೂಕು.

**ದೋಷಾರೋಪಣೆ**

ಶ್ರೀಮತಿ ಎನ್.ನಿವೇದಿತಾ 1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯಾದ ನಾನು, ಆರೋಪಿಯಾದ ನಿಮ್ಮ ಮೇಲೆ ಈ ಕೆಳಕಂಡಂತೆ ಆರೋಪಣೆಯನ್ನು ಮಾಡುತ್ತೇನೆ.

ಮೊದಲನೆಯದಾಗಿ ದಿಃ 04/11/2024 ರಂದು ಮಧ್ಯಾಹ್ನ 1.50 ಗಂಟೆ ಸಮಯದಲ್ಲಿ, ತಲಕಾಡು ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ, ಟಿ.ನರಸೀಪುರ ತಾಲ್ಲೂಕು, ವಾಟಾಳು-ಕರೋಹಟ್ಟಿ ಮುಖ್ಯ ರಸ್ತೆಯಲ್ಲಿರುವ ಅಡ್ಡಹಳ್ಳ ಸೇತುವೆಯ ಬಳಿ ಅಬಕಾರಿ ಸಿಬ್ಬಂದಿಗಳು ರಸ್ತೆಗಾವಲು ನಡೆಸುತ್ತಿದ್ದಾಗ, ಆರೋಪಿಯಾದ ನೀವು ಕರೋಹಟ್ಟಿ ಗ್ರಾಮದ ಕಡೆಯಿಂದ ಕಪ್ಪು ಬಣ್ಣದ ಹೀರೋ ಪ್ಯಾಷನ್ ಪ್ರೋ ಸಂ.ಕೆಎ-55-ಆರ್-7303 ರ ದ್ವಿಚಕ್ರ ವಾಹನದ ಪೆಟ್ರೋಲ್ ಟ್ಯಾಂಕ್ ಮೇಲೆ, ಒಂದು ಹಳದಿ ಬಣ್ಣದ ಪ್ಲಾಸ್ಟಿಕ್ ಚೀಲದಲ್ಲಿ ಒಂದು ಕಪ್ಪು ಬಣ್ಣದ ಪ್ಲಾಸ್ಟಿಕ್ ಕವರ್ ನ ಒಳಗಡೆ 90 ಮಿಲಿಯ 60 ಹೈವಾರ್ಡ್ಸ್ ಚಿಯರ್ಸ್ ವಿಸ್ಕಿಯ

ಮದ್ಯದ ಟೆಟ್ರಾ ಪ್ಯಾಕ್‌ಗಳು ಒಟ್ಟು 5.400 ಲೀಟರ್ ಮದ್ಯವನ್ನು ಯಾವುದೇ ರಹದಾರಿ ಇಲ್ಲದೆ ಅಕ್ರಮವಾಗಿ ಹೊಂದಿ ವಾಹನದಲ್ಲಿ ಸಾಗಾಣಿಕೆ ಮಾಡಿದ್ದು, ಆ ಮೂಲಕ ಮೇಲ್ಕಂಡ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ.32(1), 38(A) ಮತ್ತು 43 ರಡಿಯಲ್ಲಿ ಈ ನ್ಯಾಯಾಲಯದ ಸಂಜ್ಞಾನದೊಳಗೆ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರಿ.

ಪ್ರಶ್ನೆಃ ಈಗ ಓದಿ ಹೇಳಿದ ದೋಷಾರೋಪಣೆಯನ್ನು ಅರ್ಥಮಾಡಿಕೊಂಡಿರುವಿರಾ?

ಉತ್ತರಃ

ಪ್ರಶ್ನೆಃ ಮೇಲೆ ಹೇಳಿದ ಆರೋಪಣೆಯನ್ನು ಒಪ್ಪಿಕೊಳ್ಳುವಿರಾ? ಅಥವಾ ವಿಚಾರಣೆಯಾಗಬೇಕಾ?
ಉತ್ತರಃ

(ಈ ಮೇಲ್ಕಂಡ ದೋಷಾರೋಪಣೆಯನ್ನು ಆರೋಪಿತರಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ವಿವರಿಸಿದ ನಂತರ ಅವರು ನೀಡಿದ ಉತ್ತರವನ್ನು ನಾನು ನನ್ನ ಸ್ವಂತ ಬರಹದಲ್ಲಿ ದಾಖಲು ಮಾಡಿರುತ್ತೇನೆಂದು ಈ ಮೂಲಕ ದೃಢೀಕರಿಸುತ್ತೇನೆ)

**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ. ದ. ನ್ಯಾ ದಂ., ಟಿ.ನರಸೀಪುರ.**